| Deposition Sheets (RP.No.57) Form No.4 |
|---|

**IN THE COURT OF II Addl. CIVIL JUDGE & J.M.F.C., KARKALA.**

**Criminal Case No. 223/2017**

**ಪಿ.ಡಬ್ಲ್ಯು : 11 ಸಿ.ಡಬ್ಲ್ಯು : 9**

ಸಾಕ್ಷಿದಾರನ ಹೆಸರು : ತನ್ವಿರ್ ಸಾಹೇಬ್
ತಂದೆಯ ಹೆಸರು : ಖುರ್ಷಿದ್ ಸಾಹೆಬ್
ಪ್ರಾಯ : 35 ವರ್ಷ
ಉದ್ಯೋಗ : ಚಾಲಕ
ವಾಸ : ಮಿಯಾರು

ದಿನಾಂಕ **24.02.2023** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರುಃ-**

ಸಾಕ್ಷಿಯು ನಿಪಿ-6 ವಮತ್ತು 7 ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ನಿಪಿ-6(ಸಿ) ಮತ್ತು 7(ಬಿ) ಎಂದು ಗುರುತಿಸಲಾಯಿತು. ನಿಪಿ-6 ಮತ್ತು 7 ಕ್ಕೆ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ನನ್ನ ಸಮಕ್ಷಮದಲ್ಲಿ ಯಾವುದೇ ಸೊತ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಸಸಅ ರವರು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು)

**ಪಾಟೀ ಸವಾಲು : ಸಹಾಯಕ ಸರ್ಕಾರಿ ಅಭಿಯೋಜಕರುಃ-**

2. ದಿನಾಂಕ 14.12.2016 ರಂದು ಪೊಲೀಸರು ಸುಧಾ ಜ್ಯುವೆಲ್ಲರ್ಸ್ ನಲ್ಲಿ ನನ್ನ ಸಮಕ್ಷಮ ಸೊತ್ತು ಸ್ವಾಧೀನತ ಮಹಜರು ನಡೆಸಿ ಬೆಳ್ಳಿಯ ಸೊತ್ತುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ . ಸದ್ರಿ ದಿನಾಂಕದಂದು ವಿ ಆರ್ ಎಸ್ ಫೈನಾನ್ಸ್ ನಲ್ಲಿ ನನ್ನ ಸಮಕ್ಷಮ

ಸೊತ್ತು ಸ್ವಾಧೀನತಾ ಮಹಜರು ನಡೆಸಿ ಬಂಗಾರದ ಸೊತ್ತುಗಳನ್ನು ವಶಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು</u>** ಃ ಆರೋಪಿ ಪರ ಃ ಶ್ರೀ ಕೆ ಬಿ ಎಸ್ ವಕೀಲರಿಂದ ಃ

ನಾನು ನನ್ನ ವೈಯುಕ್ತಿಕ ಕಾರಣಕ್ಕೆ ಪೊಲೀಸ್ ಠಾಣೆಗೆ ಹೋದಾಗ ಪೊಲೀಸರು ಸಹಿ ಪಡೆದುಕೊಂಡಿರುತ್ತಾರೆ. ಯಾವ ವಿಚಾರಕ್ಕೆ ಸಹಿ ಪಡೆದುಕೊಂಡಿರುತ್ತಾರೆ ಎಂದು ನನಗೆ ಗೊತ್ತಿಲ್ಲ.

ಮರುವಿಚಾರಣೆ ಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಿ ಕೇಳಿ ಸರಿ ಇದೆ.

2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ಕಾರ್ಕಳ